ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ತೋಟಗಾರಿಕೆ ರೈತರ ಸಂಕಷ್ಟದ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) -

20 (201) ಪೌರಾಡಳಿತ ಮತ್ತು ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಪ್ರಸ್ತುತ ಕೋವಿಡ್ ಹಿನ್ನೆಲೆಯಲ್ಲಿ ದೇಶದಲ್ಲಿ ಹಾಗೂ ರಾಜ್ಯದಲ್ಲಿ ರೋಗ ಹರಡದಂತೆ ಲಾಕ್‌ಡೌನ್ ಅವಧಿಯಲ್ಲಿ ತೋಟಗಾರಿಕೆಗೆ ಸಂಬಂಧಪಟ್ಟ ಹಲವು ಹೂವು ಮತ್ತು ತರಕಾರಿ ಬೆಳೆಯುವ ರೈತರು ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಈ ರೈತರ ಸಂಕಷ್ಟವನ್ನು ನಿಭಾಯಿಸಲು ಸಹಾಯ ಧನದ ರೀತಿಯಲ್ಲಿ ಎಷ್ಟು ಮೊತ್ತ ಬಿಡುಗಡೆ ಆಗಿದೆ ; (ಮಾಹಿತಿ ನೀಡುವುದು)

(ಇ) ಈ ರೀತಿಯಲ್ಲಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ಧನವನ್ನು ವಿತರಿಸಲಾಗಿದೆಯೇ ? (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)